# ಪೇತ್ರನು ಬರೆದ ಮೊದಲನೆಯ ಪತ್ರ

## ಮುನ್ನುಡಿ

ಏಷ್ಯಾ ಮೈನರ್ ಸೀಮೆಯ ಉತ್ತರಭಾಗದಲ್ಲಿ ಚದರಿದ್ದ ಕ್ರೈಸ್ತವಿಶ್ವಾಸಿಗಳಿಗೆ ಪ್ರೇಷಿತನಾದ ಪೇತ್ರನು ಬರೆದ ಪತ್ರ ಇದು. ಈ ಪತ್ರದಲ್ಲಿ ಕ್ರೈಸ್ತವಿಶ್ವಾಸಿಗಳನ್ನು, "ದೇವರಿಂದ ಆಯ್ಕೆಯಾದ ಜನಾಂಗ, ಮೀಸಲಾದ ಪ್ರಜೆ," ಎಂದು ಕರೆದಿರುವುದು ಗಮನಾರ್ಹ. ಕ್ರೈಸ್ತಧರ್ಮಕ್ಕಾಗಿ ಚಿತ್ರಹಿಂಸೆಯನ್ನು ಅನುಭವಿಸುತ್ತಿದ್ದ ಭಕ್ತಾದಿಗಳು ತಮ್ಮ ವಿಶ್ವಾಸವನ್ನು ಕಳೆದುಕೊಳ್ಳದಂತೆ ಪ್ರೋತ್ಸಾಹಿಸುವುದೇ ಈ ಪತ್ರದ ಉದ್ದೇಶ.

ಲೇಖಕನು ಶುಭಸಂದೇಶವನ್ನು ಓದುಗರ ನೆನಪಿಗೆ ತರುತ್ತಾನೆ. ಯೇಸುಸ್ವಾಮಿಯ ಮರಣ, ಪುನರುತ್ಥಾನ ಮತ್ತು ಪುನರಾಗಮನಗಳನ್ನು ಮುಂದಿಟ್ಟು ಅವರಲ್ಲಿ ವಿಶ್ವಾಸ, ನಿರೀಕ್ಷೆಯನ್ನು ತುಂಬಲು ಯತ್ನಿಸುತ್ತಾನೆ. ವಿಶ್ವಾಸಿಗಳು ತಾಳ್ಮೆಯಿಂದಲೂ ಕಷ್ಟ ಸಹಿಷ್ಣುತೆಯಿಂದಲೂ ಬಾಳಬೇಕು. ಹಿಂಸೆಬಾಧೆಗಳು ನಮ್ಮ ವಿಶ್ವಾಸವನ್ನು ಪರಿಶೋಧಿಸುವ ಅಗ್ನಿಕುಂಡ. ಇದರ ಪರಿಣಾಮವಾಗಿ ಕ್ರಿಸ್ತ ಯೇಸುವಿನ ಪುನರಾಗಮನ ದಿನದಂದು ಸಜ್ಜೀವವೆಂಬ ಸತ್ಫಲವನ್ನು ಪಡೆಯುತ್ತೇವೆ ಎಂದು ಅಭಯವನ್ನೀಯುತ್ತಾನೆ.

ಜೀವನದಲ್ಲಿ ಎಷ್ಟೇ ಎಡರುತೊಡರುಗಳಿದ್ದರೂ ನಾವು ಯೇಸುಕ್ರಿಸ್ತರಿಗೆ ಸೇರಿದವರು ಎಂಬುದನ್ನು ವಿಶ್ವಾಸಿಗಳು ಮನಸ್ಸಿನಲ್ಲಿ ಇಟ್ಟುಕೊಂಡು ಯೇಸುಸ್ವಾಮಿಗೆ ಜೀವಂತ ಸಾಕ್ಷಿಗಳಾಗಿ ಬಾಳಬೇಕೆಂದು ಲೇಖಕನು ಕರೆನೀಡುತ್ತಾನೆ.

**ಪರಿವಿಡಿ**

| | | |
|---|---|---|
| ಪೀಠಿಕೆ | – | 1.1 – 1.2 |
| ಜೀವೋದ್ಧಾರದ ನೆನಪು | – | 1.3 – 1.12 |
| ಪವಿತ್ರ ಜೀವನಕ್ಕೆ ಕರೆ | – | 1.13 – 2.10 |
| ಕ್ರೈಸ್ತ ಬಾಳ್ವೆಯಲ್ಲಿ ಕಷ್ಟಸಹಿಷ್ಣುತೆ | – | 2.11 – 4.19 |
| ಕ್ರೈಸ್ತರ ನಮ್ರ ಹಾಗೂ ಸೇವಾಸಕ್ತ ಜೀವನ | – | 5.1 – 5.11 |
| ಸಮಾಪ್ತಿ | – | 5.12 – 5.14 |

### ಪೀಠಿಕೆ

**1** ಪೊಂತ, ಗಲಾತ್ಯ, ಕಪ್ಪದೋಕ್ಯ, ಏಷ್ಯಾ, ಬಿಥೂನಿಯ ಪ್ರಾಂತ್ಯಗಳಲ್ಲಿ ಚದುರಿಹೋಗಿ ನಿರಾಶ್ರಿತರಂತೆ
ಜೀವಿಸುತ್ತಿರುವ ದೇವಜನರಿಗೆ – ಯೇಸುಕ್ರಿಸ್ತರ ಪ್ರೇಷಿತನಾದ ಪೇತ್ರನು ಬರೆಯುವ ಪತ್ರ:
2 ನೀವು ಯೇಸುಕ್ರಿಸ್ತರಿಗೆ ಶರಣರಾಗಿ ಅವರ ರಕ್ತದಿಂದ ಶುದ್ಧೀಕರಣಹೊಂದಲು ತಂದೆಯಾದ
ದೇವರ ಸಂಕಲ್ಪಾನುಸಾರ ಆಯ್ಕೆಯಾದವರು; ಅವರ ಆತ್ಮದ ಮುಖಾಂತರ ಪವಿತ್ರೀಕರಿಸಲಾದವರು. ನಿಮಗೆ
ಕೃಪಾಶೀರ್ವಾದವೂ ಶಾಂತಿಸಮಾಧಾನವೂ ಸಮೃದ್ಧಿಯಾಗಿ ಲಭಿಸಲಿ !

### ಜೀವಂತ ನಿರೀಕ್ಷೆ

3 ನಮ್ಮ ಪ್ರಭು ಯೇಸುಕ್ರಿಸ್ತರ ತಂದೆಯಾದ ದೇವರಿಗೆ ಸ್ತುತಿಸ್ತೋತ್ರ ಸಲ್ಲಲಿ! ಯೇಸುಕ್ರಿಸ್ತರನ್ನು
ಮರಣದಿಂದ ಪುನರುತ್ಥಾನಗೊಳಿಸುವುದರ ಮೂಲಕ ದೇವರು ತಮ್ಮ ಅಪಾರ ಕರುಣೆಯಿಂದ ನಮಗೆ
ಹೊಸ ಜನ್ಮವನ್ನು ಮತ್ತು ಜೀವಂತ ನಿರೀಕ್ಷೆಯನ್ನು ನೀಡಿದ್ದಾರೆ. 4ಹೀಗೆ ಅವರು, ತಮ್ಮ ಸ್ವಂತ ಜನರಿಗಾಗಿ

ಸ್ವರ್ಗದಲ್ಲಿ ಕಾದಿರಿಸಿರುವ ಅಳಿಯದ, ಅಕ್ಷಯವಾದ, ಅನಂತವಾದ ಸಿರಿಸಂಪತ್ತಿಗೆ ನಿಮ್ಮನ್ನು ಬಾಧ್ಯರನ್ನಾಗಿ
ಮಾಡಿದ್ದಾರೆ. 5ಅಂತ್ಯಕಾಲದಲ್ಲಿ ಪ್ರತ್ಯಕ್ಷವಾಗಲಿರುವ ಜೀವೋದ್ಧಾರವು ವಿಶ್ವಾಸಿಗಳಾದ ನಿಮಗೆ ಲಭಿಸುವಂತೆ
ದೇವರು ತಮ್ಮ ಶಕ್ತಿಯಿಂದ ನಿಮ್ಮನ್ನು ಕಾಪಾಡುತ್ತಾರೆ.

6 ಸದ್ಯಕ್ಕೆ ನೀವು ಕೊಂಚಕಾಲ ಹಲವಿಧವಾದ ಪರಿಶೋಧನೆಗಳ ನಿಮಿತ್ತ ದುಃಖವನ್ನು
ಅನುಭವಿಸಬೇಕಾಗಿದ್ದರೂ ಪ್ರತ್ಯಕ್ಷವಾಗಲಿರುವ ಆ ಸಿರಿಸಂಪತ್ತನ್ನು ಜ್ಞಾಪಿಸಿಕೊಂಡು ಹರ್ಷಚಿತ್ತರಾಗಿರಿ.
7ಪರಿಶೋಧನೆಗಳು ಬಂದೊದಗುವುದು ನಿಮ್ಮ ವಿಶ್ವಾಸವನ್ನು ಪುಟವಿಡುವುದಕ್ಕಾಗಿಯೇ. ನಶಿಸಿ ಹೋಗುವ
ಬಂಗಾರವೂ ಕೂಡ ಬೆಂಕಿಯಿಂದ ಪರಿಶೋಧಿತವಾಗುತ್ತದೆ. ಬಂಗಾರಕ್ಕಿಂತಲೂ ಬಹು ಅಮೂಲ್ಯವಾದ
ನಿಮ್ಮ ವಿಶ್ವಾಸವು ಶೋಧಿತವಾಗಬೇಕು. ಆಗ ಮಾತ್ರ ಯೇಸುಕ್ರಿಸ್ತರು ಪ್ರತ್ಯಕ್ಷವಾಗುವ ದಿನದಂದು ನಿಮಗೆ
ಪ್ರಶಂಸೆ, ಪ್ರತಿಷ್ಠೆ ಹಾಗೂ ಪ್ರತಿಭೆ ದೊರಕುತ್ತವೆ. 8ಕ್ರಿಸ್ತಯೇಸುವನ್ನು ನೀವು ನೋಡದಿದ್ದರೂ ಅವರನ್ನು
ಪ್ರೀತಿಸುತ್ತೀರಿ. ನೀವೀಗ ಕಣ್ಣಾರೆ ಕಾಣದಿದ್ದರೂ ಅವರನ್ನು ವಿಶ್ವಾಸಿಸುತ್ತೀರಿ. 9ಇದರ ಅಂತಿಮ ಫಲವಾಗಿ
ಜೀವೋದ್ಧಾರವನ್ನು ಪಡೆಯುತ್ತೀರಿ. ಈ ಕಾರಣದಿಂದ ಅವರ್ಣನೀಯವಾದ ಮಹದಾನಂದದಿಂದ
ನಲಿಯುತ್ತೀರಿ.

10 ಈ ಜೀವೋದ್ಧಾರವನ್ನು ಕುರಿತೇ ಪ್ರವಾದಿಗಳು ಸೂಕ್ಷ್ಮವಾಗಿ ವಿಚಾರಿಸಿ ಸಂಶೋಧನೆ
ನಡೆಸಿದರು. ದೇವರು ನಿಮಗೆ ಕೊಡಲಿದ್ದ ಈ ವರವನ್ನು ಕುರಿತೇ ಅವರು ಪ್ರವಾದಿಸಿದರು. 11ಕ್ರಿಸ್ತಯೇಸು
ಅನುಭವಿಸಬೇಕಾಗಿದ್ದ ಮರಣವನ್ನು, ಯಾತನೆಯನ್ನು ಮತ್ತು ಅನಂತರದ ಪುನರುತ್ಥಾನದ ಮಹಿಮೆಯನ್ನು
ಈ ಪ್ರವಾದಿಗಳು ಪ್ರವಾದಿಸುವಾಗ, ತಮ್ಮಲ್ಲಿದ್ದ ಕ್ರಿಸ್ತಾತ್ಮವು ಇದಕ್ಕೆ ಯಾವ ಸಮಯ ಸಂದರ್ಭವನ್ನು
ಸೂಚಿಸುತ್ತದೆ ಎಂಬುದನ್ನು ಕಂಡುಹಿಡಿಯಲು ಪ್ರಯತ್ನಿಸಿದರು. 12ಈ ಸೇವಾಕಾರ್ಯವನ್ನು ಅವರು
ಸ್ವಾರ್ಥಸಾಧನೆಗಾಗಿ ಅಲ್ಲ, ನಿಮಗೋಸ್ಕರವಾಗಿಯೇ ಮಾಡುತ್ತಿರುವುದಾಗಿ ಅವರಿಗೆ ತಿಳಿಸಲಾಗಿತ್ತು. ಅವರು
ಪ್ರವಾದಿಸಿದ ಘಟನೆಗಳು ಈಗ ಸಂಭವಿಸಿವೆ ಎಂಬುದನ್ನು ಸ್ವರ್ಗದಿಂದ ಕಳುಹಿಸಲಾದ ಪವಿತ್ರಾತ್ಮರ
ಶಕ್ತಿಯಿಂದ, ಶುಭಸಂದೇಶವನ್ನು ಸಾರಿದವರ ಮುಖಾಂತರ ನಿಮಗೆ ಪ್ರಕಟಿಸಲಾಗಿದೆ. ದೇವದೂತರು ಸಹ
ವೀಕ್ಷಿಸಲು ಅಪೇಕ್ಷಿಸುವಂಥ ಸಂಗತಿಗಳಿವು.

## ಪವಿತ್ರ ಜೀವನಕ್ಕೆ ಕರೆ

13 ಆದ್ದರಿಂದ ನೀವು ಸ್ವಸ್ಥಚಿತ್ತರಾಗಿರಿ. ನಿಮ್ಮ ಮನಸ್ಸು ಕಾರ್ಯೋನ್ಮುಖವಾಗಿರಲಿ. ಯೇಸುಕ್ರಿಸ್ತರು
ಪ್ರತ್ಯಕ್ಷರಾಗುವಾಗ ನಿಮಗೆ ಲಭಿಸಲಿರುವ ಸೌಭಾಗ್ಯದಲ್ಲಿ ಪೂರ್ಣ ನಿರೀಕ್ಷೆ ಉಳ್ಳವರಾಗಿರಿ. 14ವಿಧೇಯರಾದ
ಮಕ್ಕಳಂತೆ ನಡೆದುಕೊಳ್ಳಿ. ನೀವು ಅಜ್ಞಾನಿಗಳಾಗಿದ್ದಾಗ ದುರಿಚ್ಛೆಗಳಿಗೆ ಈಡಾಗಿದ್ದಿರಿ; ಈಗ ಅವುಗಳಿಗೆ
ಎಡೆಕೊಡಬೇಡಿ. 15ಅದಕ್ಕೆ ಬದಲು ನಿಮ್ಮನ್ನು ಕರೆದ ದೇವರು ಪವಿತ್ರರಾಗಿರುವಂತೆ ನೀವೂ ನಿಮ್ಮ
ನಡೆನುಡಿಯಲ್ಲಿ ಪವಿತ್ರರಾಗಿರಿ. 16ಏಕೆಂದರೆ, “ನಾನು ಪವಿತ್ರನಾಗಿರುವುದರಿಂದ ನೀವೂ ಪವಿತ್ರರಾಗಿರಿ,”
ಎಂದು ಲಿಖಿತವಾಗಿದೆ.

17 ನೀವು ದೇವರಿಗೆ ಪ್ರಾರ್ಥನೆಮಾಡುವಾಗ, ಅವರನ್ನು “ತಂದೆಯೇ” ಎಂದು ಸಂಬೋಧಿಸುತ್ತೀರಿ.
ಅವರು ಪಕ್ಷಪಾತಿ ಅಲ್ಲ. ಎಲ್ಲರಿಗೂ ಅವರವರ ಕೃತ್ಯಗಳಿಗೆ ತಕ್ಕಂತೆ ನ್ಯಾಯತೀರ್ಪು ನೀಡುವವರು.
ಆದ್ದರಿಂದ ನಿಮ್ಮ ಇಹಲೋಕದ ಯಾತ್ರೆಯನ್ನು ಭಯಭಕ್ತಿಯಿಂದ ಸಾಗಿಸಿರಿ. 18ನಿಮ್ಮ ಪೂರ್ವಜರಿಂದ
ಪರಂಪರೆಯಾಗಿ ಬಂದಿರುವ ನಿರರ್ಥಕ ನಡವಳಿಕೆಯಿಂದ ನಿಮ್ಮನ್ನು ಬಿಡುಗಡೆಮಾಡಲು ಕೊಡಲಾದ
ಬೆಲೆಯು ಎಂಥದ್ದೆಂದು ನಿಮಗೆ ತಿಳಿದಿದೆ. ಅದು ನಶಿಸಿ ಹೋಗುವ ಬೆಳ್ಳಿಬಂಗಾರವಲ್ಲ. 19ಬದಲಿಗೆ, ಯಾವ
ನ್ಯೂನತೆಯೂ ಇಲ್ಲದ, ಯಾವ ಕಳಂಕವೂ ಇಲ್ಲದ ಬಲಿಯ ಕುರಿಮರಿಯಂಥ ಕ್ರಿಸ್ತಯೇಸುವಿನ ಅಮೂಲ್ಯ
ರಕ್ತವೇ ಆ ಬೆಲೆ. 20ವಿಶ್ವಸೃಷ್ಟಿಗೆ ಮೊದಲೇ ಯೇಸುಕ್ರಿಸ್ತರನ್ನು ದೇವರು ಇದಕ್ಕೆಂದು ಗೊತ್ತುಮಾಡಿದ್ದರು. ಈ
ಅಂತಿಮ ದಿನಗಳಲ್ಲಿ ನಿಮಗೋಸ್ಕರ ಯೇಸು ಪ್ರತ್ಯಕ್ಷರಾದರು. 21ಮರಣದಿಂದ ಪುನರುತ್ಥಾನಗೊಳಿಸಿ
ಮಹಿಮೆಪಡಿಸಿದ ದೇವರಲ್ಲಿ ನೀವು ವಿಶ್ವಾಸವಿಟ್ಟದ್ದು ಇವರ ಮುಖಾಂತರವೇ. ಹೀಗೆ ನಿಮ್ಮ ವಿಶ್ವಾಸವೂ
ನಿರೀಕ್ಷೆಯೂ ದೇವರಲ್ಲೇ ನೆಲೆಗೊಂಡಿವೆ.

22 ಸತ್ಯಕ್ಕೆ ಶರಣಾಗಿ ಆತ್ಮಶುದ್ಧಿ ಹೊಂದಿರುವ ನೀವು ಸಹೋದರರರನ್ನು ನಿಷ್ಕಪಟದಿಂದ
ಪ್ರೀತಿಸಬಲ್ಲಿರಿ. ಎಂದೇ, ಒಬ್ಬರನ್ನೊಬ್ಬರು ಹೃತ್ಪೂರ್ವಕವಾಗಿಯೂ ಯಥಾರ್ಥವಾಗಿಯೂ ಪ್ರೀತಿಸಿರಿ.
23ನೀವು ಸಜೀವವಾದ ಅನಂತ ದೈವವಾಕ್ಯದ ಮೂಲಕ ಹೊಸಜನ್ಮವನ್ನು ಪಡೆದಿದ್ದೀರಿ; ಈ ಜನ್ಮವನ್ನು
ನೀವು ಪಡೆದಿರುವುದು ಮರ್ತ್ಯ ಮಾನವನಿಂದಲ್ಲ, ಅಮರ ದೇವರಿಂದ. 24ಪವಿತ್ರಗ್ರಂಥದಲ್ಲಿ ಬರೆದಿರುವಂತೆ:

ನರಮಾನವರೆಲ್ಲರೂ ಗರಿಹುಲ್ಲಿನಂತೆ
ಅವರ ವೈಭವವೆಲ್ಲವೂ ಹುಲ್ಲಿನ ಹೂವಿನಂತೆ.
ಹುಲ್ಲೊಣಗಿ ಹೂ ಬಾಡಿಬೀಳುವುದು
ಪ್ರಭುವಿನ ವಾಕ್ಯವಾದರೋ
ಶಾಶ್ವತವಾಗಿ ನಿಲ್ಲುವುದು.

25 ಈ ವಾಕ್ಯವೇ ನಿಮಗೆ ಸಾರಲಾದ ಶುಭಸಂದೇಶ.

## ಪವಿತ್ರ ಪ್ರಜೆ – ಸಜೀವ ಶಿಲೆ

**2** ಎಲ್ಲಾ ಕೆಟ್ಟತನವನ್ನು ಬಿಟ್ಟುಬಿಡಿ. ಸುಳ್ಳಾಡುವುದಾಗಲಿ, ವಂಚಿಸುವುದಾಗಲಿ, ಅಸೂಯೆಪಡುವುದಾಗಲಿ,
ಪರದೂಷಣೆ ಮಾಡುವುದಾಗಲಿ ನಿಮ್ಮಲ್ಲಿ ಇರಬಾರದು. 2ಹೊಸಜನ್ಮ ಪಡೆದ ಶಿಶುಗಳಂತೆ, ಶುದ್ಧವಾದ
ಆಧ್ಯಾತ್ಮಿಕ ಹಾಲಿಗಾಗಿ ಹಂಬಲಿಸಿರಿ; ಅದನ್ನು ಕುಡಿದು ಬೆಳೆಯುತ್ತಾ ಜೀವೋದ್ಧಾರವನ್ನು ಹೊಂದುವಿರಿ.
3"ಪ್ರಭು ಎಂಥಾ ದಯಾಳು ಎಂಬುದನ್ನು ನೀವು ಅನುಭವದಿಂದ ಅರಿತುಕೊಂಡಿದ್ದೀರಿ."
4 ಪ್ರಭುವಿನ ಬಳಿಗೆ ಬನ್ನಿ; ಸಜೀವ ಶಿಲೆಯಾದ ಅವರನ್ನು ಮಾನವರು ನಿಷ್ಪ್ರಯೋಜಕ ಎಂದು
ತಿರಸ್ಕರಿಸಿದರೂ ದೇವರು ಅಮೂಲ್ಯರೆಂದು ಆರಿಸಿಕೊಂಡರು. 5ನೀವೂ ಸಹ ಸಜೀವ ಶಿಲೆಗಳಾಗಿದ್ದೀರಿ;
ಆಧ್ಯಾತ್ಮಿಕ ದೇವಾಲಯವನ್ನು ನಿರ್ಮಿಸಲು ನಿಮ್ಮನ್ನೇ ಅರ್ಪಿಸಿಕೊಳ್ಳಿ. ಆ ದೇವಾಲಯದಲ್ಲೇ ಯೇಸುಕ್ರಿಸ್ತರ
ಮುಖಾಂತರ ದೇವರಿಗೆ ಮೆಚ್ಚುಗೆಯಾಗಿರುವ ಆಧ್ಯಾತ್ಮಿಕ ಬಲಿಗಳನ್ನು ಸಮರ್ಪಿಸುವ ಪವಿತ್ರ
ಯಾಜಕವರ್ಗದವರು ನೀವಾಗಿರುವಿರಿ. 6ಈ ಕಾರಣದಿಂದಲೇ ಪವಿತ್ರ ಗ್ರಂಥ ಇಂತೆನ್ನುತ್ತದೆ:

"ಅಮೂಲ್ಯ ಶಿಲೆಯೊಂದನ್ನು
ನಾನಾರಿಸಿಕೊಂಡೆ.
ಸಿಯೋನಿನಲ್ಲಿ ಅದನ್ನೇ ಮುಖ್ಯ
ಮೂಲೆಗಲ್ಲನ್ನಾಗಿರಿಸಿದೆ.
ಎಂದಿಗೂ ಆಶಾಭಂಗವಾಗದು
ಅದರ ಮೇಲೆ ವಿಶ್ವಾಸವಿಡುವವರಿಗೆ."

7 ವಿಶ್ವಾಸವಿಟ್ಟಿರುವ ನಿಮಗಂತೂ
ಈ ಶಿಲೆ ಅತ್ಯಮೂಲ್ಯವಾದುದು.
"ಮನೆಕಟ್ಟುವವರು ಬೇಡವೆಂದು
ಮೂಲೆಗೆಸೆದ ಕಲ್ಲೇ
ಪ್ರಮುಖ ಮೂಲೆಗಲ್ಲಾಯಿತು."
8 "ಜನರು ಎಡವಿಬೀಳುವ ಕಲ್ಲಿದು;
ಅವರು ಮುಗ್ಗರಿಸಿ ಬೀಳುವ ಬಂಡೆಯಿದು."

ವಿಶ್ವಾಸವಿಡದವರಿಗಾದರೋ ಮೇಲಿನ ವಾಕ್ಯಗಳು ಅನ್ವಯಿಸುತ್ತವೆ. ಜನರು ದೇವರ ವಾಕ್ಯದಲ್ಲಿ
ವಿಶ್ವಾಸವಿಡದಿರುವುದರಿಂದಲೇ ಎಡವಿಬೀಳುತ್ತಾರೆ. ಅವರ ಬಗ್ಗೆ ದೈವಸಂಕಲ್ಪವೂ ಇದೇ ಆಗಿತ್ತು.
9 ನೀವು ದೇವರು ಆಯ್ದುಕೊಂಡ ಜನಾಂಗ; ರಾಜಯಾಜಕರು, ಪವಿತ್ರ ಪ್ರಜೆ, ದೇವರ ಸ್ವಕೀಯ
ಜನ; ಅವರ ಅದ್ಭುತ ಕಾರ್ಯಗಳನ್ನು ಪ್ರಚುರಪಡಿಸುವುದಕ್ಕಾಗಿಯೇ ಆಯ್ಕೆಯಾದವರು. ಕಾರ್ಗತ್ತಲಿನಿಂದ
ತಮ್ಮ ಅದ್ಭುತಕರವಾದ ಬೆಳಕಿಗೆ ನಿಮ್ಮನ್ನು ಕರೆತಂದವರು ಅವರೇ. 10ಒಮ್ಮೆ ನೀವು ಗಣನೆಗೆ ಬಾರದ

ಜನಗಳಾಗಿದ್ದಿರಿ. ಈಗಲಾದರೋ ದೇವ ಪ್ರಜೆಗಳೇ ಆಗಿದ್ದೀರಿ. ಹಿಂದೊಮ್ಮೆ, ದೇವರ ಕರುಣೆ ಏನೆಂಬುದೇ ನಿಮಗೆ ತಿಳಿದಿರಲಿಲ್ಲ. ಈಗ ಅವರ ಕರುಣೆಯನ್ನು ಸವಿದಿದ್ದೀರಿ.

### ದೇವಶರಣರು

11 ಪ್ರಿಯರೇ, ಈ ಲೋಕದಲ್ಲಿ ಆಗಂತುಕರಂತೆಯೂ ಅಪರಿಚಿತರಂತೆಯೂ ಬಾಳುವ ನೀವು ಆತ್ಮಕ್ಕೆ ವಿರುದ್ಧ ಹೋರಾಡುವ ದೈಹಿಕ ವ್ಯಾಮೋಹಗಳಿಂದ ದೂರವಿರಬೇಕೆಂದು ನಿಮ್ಮನ್ನು ಕೇಳಿಕೊಳ್ಳುತ್ತೇನೆ.
12ಅನ್ಯಧರ್ಮೀಯರ ಮಧ್ಯೆ ನಿಮ್ಮ ನಡತೆ ಆದರ್ಶಪ್ರಾಯವಾಗಿರಲಿ. ಅವರು ನಿಮ್ಮನ್ನು ದುಷ್ಕರ್ಮಿಗಳೆಂದು ದೂಷಿಸಿದರೂ ನಿಮ್ಮ ಸತ್ಕಾರ್ಯಗಳನ್ನು ಮೆಚ್ಚಿಕೊಂಡು ಕ್ರಿಸ್ತಯೇಸುವಿನ ಪುನರಾಗಮನದ ದಿನದಂದು ದೇವರನ್ನು ಕೊಂಡಾಡುವರು.

13 ಎಲ್ಲ ಮಾನವ ಅಧಿಕಾರಿಗಳಿಗೂ ಪ್ರಭುವಿನ ನಿಮಿತ್ತ ಅಧೀನರಾಗಿರಿ. ಸಕಲ ಅಧಿಕಾರವನ್ನು ಪಡೆದಿರುವ ದೇಶಾಧಿಕಾರಿಗೆ ಅಧೀನರಾಗಿ ನಡೆಯಿರಿ.
14ದುಷ್ಟರನ್ನು ಶಿಕ್ಷಿಸುವುದಕ್ಕೂ ಶಿಷ್ಟರನ್ನು ಪ್ರಶಂಸಿಸುವುದಕ್ಕೂ ಆತನಿಂದ ನೇಮಿತವಾಗಿರುವ ರಾಜ್ಯಪಾಲರಿಗೂ ಅಧೀನರಾಗಿ ಬಾಳಿರಿ.
15ನಿಮ್ಮ ಒಳ್ಳೆಯ ನಡತೆಯಿಂದ, ಅರಿವಿಲ್ಲದೆ ಮಾತನಾಡುವ ಮೂಢಜನರ ಬಾಯನ್ನು ಮುಚ್ಚಿಸಬೇಕೆಂಬುದೇ ದೇವರ ಇಚ್ಛೆ.
16ಸ್ವತಂತ್ರರಂತೆ ಬಾಳಿರಿ; ಆದರೆ ಕೆಟ್ಟತನವನ್ನು ಮರೆಮಾಚಲು ನಿಮ್ಮ ಸ್ವಾತಂತ್ರ್ಯವನ್ನು ದುರುಪಯೋಗ ಮಾಡಿಕೊಳ್ಳಬೇಡಿ; ದೇವರಿಗೆ ದಾಸರಾಗಿ ಬಾಳಿರಿ.
17ಸರ್ವರನ್ನೂ ಸನ್ಮಾನಿಸಿರಿ, ಸಹೋದರರನ್ನು ಸ್ನೇಹಿಸಿರಿ, ದೇವರಲ್ಲಿ ಭಯಭಕ್ತಿ ಇಡಿ, ದೇಶಾಧಿಕಾರಿಗಳಿಗೆ ಗೌರವ ನೀಡಿ.

### ಕ್ರಿಸ್ತ ಯಾತನೆ – ನಿಮಗೆ ಸಂರಕ್ಷಣೆ

18 ಕೆಲಸಗಾರರೇ, ನಿಮ್ಮ ಮೇಲಿನ ಅಧಿಕಾರಿಗಳಿಗೆ ಅಧೀನರಾಗಿರಿ. ಅವರಿಗೆ ಪೂರ್ಣಮರ್ಯಾದೆಯನ್ನು ತೋರಿಸಿರಿ. ದಯಾವಂತರೂ ಹಿತಚಿಂತಕರೂ ಆಗಿರುವ ಅಧಿಕಾರಿಗಳಿಗೆ ಮಾತ್ರವಲ್ಲ, ಕಠಿಣವಾಗಿ ವರ್ತಿಸುವವರಿಗೂ ವಿಧೇಯರಾಗಿರಿ.
19ಯಾವನಾದರೂ ಅನ್ಯಾಯವಾಗಿ ಹಿಂಸೆಬಾಧೆಗಳನ್ನು ಅನುಭವಿಸಬೇಕಾಗಿ ಬಂದಾಗ ಅದನ್ನು ದೇವರ ಹೆಸರಿನಲ್ಲಿ ಸಹಿಸಿಕೊಂಡರೆ ಅವನು ಮೆಚ್ಚುಗೆಯನ್ನು ಗಳಿಸುತ್ತಾನೆ.
20ನೀವು ತಪ್ಪುಮಾಡಿ, ಶಿಕ್ಷೆಗೆ ಗುರಿಯಾದಾಗ ತಾಳ್ಮೆಯಿಂದಿದ್ದರೆ ಅದೇನೂ ದೊಡ್ಡ ಕಾರ್ಯವಲ್ಲ. ಆದರೆ ಒಳ್ಳೆಯದನ್ನು ಮಾಡಿಯೂ ಬರುವ ಹಿಂಸೆಬಾಧೆಗಳನ್ನು ತಾಳ್ಮೆಯಿಂದ ಸಹಿಸಿಕೊಂಡರೆ, ದೇವರು ನಿಮ್ಮನ್ನು ಮೆಚ್ಚುತ್ತಾರೆ.
21ನೀವು ಹೀಗೆ ಜೀವಿಸಬೇಕೆಂದೇ ದೇವರು ನಿಮ್ಮನ್ನು ಕರೆದಿದ್ದಾರೆ. ಕ್ರಿಸ್ತಯೇಸು ಸಹ ನಿಮಗಾಗಿ ಹಿಂಸೆಬಾಧೆಯನ್ನು ಅನುಭವಿಸಿದರು; ತಮ್ಮ ಹೆಜ್ಜೆಯ ಜಾಡನ್ನೇ ನೀವು ಅನುಸರಿಸುವಂತೆ ನಿಮಗೊಂದು ಆದರ್ಶವನ್ನು ಬಿಟ್ಟುಹೋದರು.
22ಅವರು ಯಾವ ಪಾಪವನ್ನೂ ಮಾಡಲಿಲ್ಲ. ಅವರ ಬಾಯಿಂದ ಅಬದ್ಧವಾದ ಮಾತೊಂದೂ ಕೇಳಿಬರಲಿಲ್ಲ.
23ಅವರು, ಅವಮಾನಪಡಿಸಿದವರನ್ನು ಪ್ರತಿಯಾಗಿ ಅವಮಾನ ಪಡಿಸಲಿಲ್ಲ. ಅವರು ಯಾತನೆಯನ್ನು ಅನುಭವಿಸುವಾಗಲೂ ಯಾರಿಗೂ ಬೆದರಿಕೆ ಹಾಕಲಿಲ್ಲ. ಬದಲಿಗೆ, ಸತ್ಯಸ್ವರೂಪರೂ ನ್ಯಾಯಾಧಿಪತಿಯೂ ಆದ ದೇವರಿಗೆ ತಮ್ಮನ್ನೇ ಒಪ್ಪಿಸಿಕೊಂಡರು.
24ನಾವು ಪಾಪದ ಪಾಲಿಗೆ ಸತ್ತು, ಸತ್ಯಕ್ಕೋಸ್ಕರ ಜೀವಿಸುವಂತೆ ಕ್ರಿಸ್ತಯೇಸು ತಮ್ಮ ದೇಹದಲ್ಲಿ ನಮ್ಮ ಪಾಪಗಳನ್ನು ಹೊತ್ತು ಶಿಲುಬೆಯ ಮರವನ್ನೇರಿದರು. ಅವರ ಗಾಯಗಳಿಂದ ನೀವು ಗುಣಹೊಂದಿದಿರಿ.
25ನೀವು ದಾರಿತಪ್ಪಿದ ಕುರಿಗಳಂತೆ ಅಲೆಯುತ್ತಿದ್ದಿರಿ. ಈಗಲಾದರೋ ನಿಮ್ಮ ಆತ್ಮಗಳನ್ನು ಕಾಯುವ ಕುರಿಗಾಹಿಯೂ ಸಂರಕ್ಷಕನೂ ಆದಾತನ ಬಳಿಗೆ ಮರಳಿದ್ದೀರಿ.

### ಸತಿಪತಿಯರ ಸನ್ನಡತೆ

**3** ಅಂತೆಯೇ ಸ್ತ್ರೀಯರೇ, ನೀವು ನಿಮ್ಮ ಪತಿಯರಿಗೆ ವಿಧೇಯರಾಗಿರಿ. ಅವರಲ್ಲಿ ಕೆಲವರು ದೇವರ ವಾಕ್ಯವನ್ನು ನಂಬದೆ ಇರಬಹುದು. ಆದರೂ ಯಾವ ಮಾತುಕತೆಯಿಲ್ಲದೆ ನಿಮ್ಮ ಸನ್ನಡತೆಯಿಂದಲೇ ಅವರನ್ನು ಜಯಿಸಬಹುದು.
2ಅವರು ಗಮನಿಸುವುದು ತಮ್ಮ ಪತ್ನಿಯರ ಭಯಭಕ್ತಿಯನ್ನು,

ಸುಗುಣಶೀಲತೆಯನ್ನು. [3]ಕೇಶವಿನ್ಯಾಸ, ಚಿನ್ನಾಭರಣದ ತೊಡುಗೆ, ನಯನವುರಾದ ಉಡುಗೆ – ಈ ಮೊದಲಾದ ಹೊರಗಣ ಶೃಂಗಾರವೇ ನಿಮ್ಮ ಅಲಂಕಾರವಾಗಿರಬಾರದು. [4]ಬದಲಿಗೆ, ಶಾಶ್ವತವಾದ, ಶಾಂತ ಹಾಗೂ ಸೌಮ್ಯಗುಣಗಳಿಂದ ಕೂಡಿದ ಅಂತರ್ಯದ ಭೂಷಣವೇ ನಿಮ್ಮ ಅಲಂಕಾರವಾಗಿರಲಿ. ಇದೇ ದೇವರ ದೃಷ್ಟಿಯಲ್ಲಿ ಅತೀ ಅಮೂಲ್ಯವಾದುದು. [5]ಪ್ರಾಚೀನ ಕಾಲದ ದೈವಭಕ್ತೆಯರಾದ ಸ್ತ್ರೀಯರು ಹೀಗೆಯೇ ಸಿಂಗರಿಸಿಕೊಂಡು ತಮ್ಮ ತಮ್ಮ ಪತಿಯರಿಗೆ ವಿಧೇಯರಾಗಿದ್ದರು. [6]ಉದಾಹರಣೆಗೆ: ಸಾರಳು ತನ್ನ ಪತಿ ಅಬ್ರಹಾಮನಿಗೆ ವಿಧೇಯಳಾಗಿದ್ದು ಆತನನ್ನು, "ಯಜಮಾನ" ಎಂದು ಕರೆಯುತ್ತಿದ್ದಳು. ಯಾವ ಭಯಭೀತಿಯಿಲ್ಲದೆ ಸತ್ಕಾರ್ಯಗಳನ್ನು ಮಾಡುವವರಾಗಿದ್ದರೆ, ನೀವೂ ಸಾರಳ ಕುಮಾರ್ತಿಯರೇ ಹೌದು.

7 ಅದೇ ಪ್ರಕಾರ ಪುರುಷರೇ, ಸರಿಯಾದ ತಿಳುವಳಿಕೆಯಿಂದ ನಿಮ್ಮ ನಿಮ್ಮ ಪತ್ನಿಯರೊಡನೆ ಸಹಜೀವನ ನಡೆಸಿರಿ. ಅವರು ಅಬಲೆಯರು ಮಾತ್ರವಲ್ಲ, ಸಜ್ಜೀವ ಕೊಡುಗೆಗೆ ನಿಮ್ಮೊಂದಿಗೆ ಸಮಬಾಧ್ಯರು ಎಂದು ತಿಳಿದು ಅವರನ್ನು ಗೌರವಿಸಿರಿ. ಆಗ ನಿಮ್ಮ ಪ್ರಾರ್ಥನೆಗೆ ಅಡಚಣೆ ಉಂಟಾಗದು.

### ಸದಾಚಾರಕ್ಕಾಗಿ ಶಿಕ್ಷೆ – ಸಹಿಷ್ಣುತೆ

8 ಕಡೆಯದಾಗಿ, ನೀವೆಲ್ಲರೂ ಏಕ ಮನಸ್ಸುಳ್ಳವರಾಗಿರಿ; ಪರಸ್ಪರ ಸಹಾನುಭೂತಿ ಇರಲಿ. ಒಡಹುಟ್ಟಿದವರಂತೆ ಒಬ್ಬರನ್ನೊಬ್ಬರು ಪ್ರೀತಿಸಿರಿ; ದಯೆತೋರುವವರೂ ದೀನಭಾವವುಳ್ಳವರೂ ಆಗಿರಿ. [9]ಮುಯ್ಯಿಗೆ ಮುಯ್ಯಿ ತೀರಿಸಬೇಡಿರಿ; ಶಾಪಕ್ಕೆ ಪ್ರತಿಶಾಪ ಹಾಕದೆ ಆಶೀರ್ವಾದ ಮಾಡಿರಿ. ಹೀಗೆ ಮಾಡಿದರೆ ದೇವರ ಆಶೀರ್ವಾದವನ್ನು ಬಾಧ್ಯವಾಗಿ ಪಡೆಯುವಿರಿ.

10 "ಆನಂದಕರ ಜೀವನದ ಬಯಕೆ
ಯಾರಿಗಿದೆಯೋ
ಸುದಿನಗಳನು ಕಾಣುವ ಆಶೆ ಯಾರಿಗಿದೆಯೋ
ಅಂಥವನು ಬಿಗಿಹಿಡಿಯಲಿ ನಾಲಿಗೆಯನು
ಕೆಟ್ಟದನು ನುಡಿಯದಂತೆ
ತಡೆಹಿಡಿಯಲಿ ತುಟಿಯನು
ಕಪಟವನಾಡದಂತೆ.
11 ಕೆಡಕನ್ನು ಬಿಟ್ಟು ಒಳಿತನ್ನು ಕೈಗೊಳ್ಳಲಿ
ಶಾಂತಿಯನರಸಿ ಅದರ ಸ್ಥಾಪನೆಗೆ ಶ್ರಮಿಸಲಿ.
12 ನೀತಿವಂತರನು ಕಾಯುವನು ಸರ್ವೇಶ್ವರನು
ಅವರ ವಿಜ್ಞಾಪನೆಗೆ ಕಿವಿಗೊಡುವನು.
ಕೆಡುಕರಿಗಾದರೋ ಆತನು ವಿಮುಖನು,"
ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ.

13 ನೀವು ಒಳ್ಳೆಯದನ್ನು ಮಾಡುವುದರಲ್ಲಿ ಆಸಕ್ತರಾಗಿದ್ದರೆ ನಿಮಗೆ ಕೇಡು ಬಗೆಯುವವರು ಯಾರು? [14]ನ್ಯಾಯನೀತಿಯ ನಿಮಿತ್ತ ಹಿಂಸೆಯನ್ನು ಅನುಭವಿಸಬೇಕಾಗಿ ಬಂದರೂ ನೀವು ಭಾಗ್ಯವಂತರು. ಮಾನವರ ಬೆದರಿಕೆಗೆ ಹೆದರಬೇಡಿ, ಕಳವಳ ಪಡಬೇಡಿ. [15]ಕ್ರಿಸ್ತಯೇಸುವನ್ನು ಪ್ರಭುವೆಂದು ನಿಮ್ಮ ಹೃದಯಗಳಲ್ಲಿ ಪ್ರತಿಷ್ಠಾಪಿಸಿರಿ. ನಿಮ್ಮಲ್ಲಿರುವ ನಂಬಿಕೆ ನಿರೀಕ್ಷೆಯ ಬಗ್ಗೆ ಯಾರಾದರೂ ಪ್ರಶ್ನಿಸಿದರೆ ಅವರಿಗೆ ತಕ್ಕ ಉತ್ತರಕೊಡಲು ಸರ್ವದಾ ಸಿದ್ಧರಾಗಿರಿ. [16]ಹಾಗೆ ಉತ್ತರ ಕೊಡುವಾಗ ಮರ್ಯಾದೆಯಿಂದಲೂ ಶಾಂತಿ ಸಮಾಧಾನದಿಂದಲೂ ಮಾತನಾಡಿ. ನಿಮ್ಮ ಮನಸ್ಸಾಕ್ಷಿ ಶುದ್ಧವಾಗಿರಲಿ. ಆಗ ಉತ್ತಮವಾದ ನಿಮ್ಮ ಕ್ರಿಸ್ತೀಯ ವರ್ತನೆಯನ್ನು ಕಂಡು ದೂಷಿಸಿದವರು, ನಿಮ್ಮನ್ನು ನಿಂದಿಸಿದ್ದಕ್ಕಾಗಿ ತಾವೇ ನಾಚಿಕೆಪಡುವರು. [17]ಕೆಟ್ಟದ್ದನ್ನು ಮಾಡಿ ಶಿಕ್ಷೆಯನ್ನು ಅನುಭವಿಸುವುದಕ್ಕಿಂತ ದೇವರ ಚಿತ್ತವಾದರೆ, ಒಳ್ಳೆಯದನ್ನು ಮಾಡಿ ಶಿಕ್ಷೆಯನ್ನು ಅನುಭವಿಸುವುದೇ ಲೇಸು. [18]ಅಂತೆಯೇ ಕ್ರಿಸ್ತಯೇಸು ನೀತಿವಂತರಾಗಿದ್ದರೂ ಅನೀತಿವಂತರಿಗಾಗಿ ಪ್ರಾಣತ್ಯಾಗ ಮಾಡಿದರು. ಪಾಪನಿವಾರಣಾರ್ಥವಾಗಿ ಒಂದೇ ಸಾರಿಗೆ ಮಾತ್ರವಲ್ಲ, ಎಂದೆಂದಿಗೂ ನಮ್ಮನ್ನು ದೇವರ ಬಳಿಗೆ ಸೇರಿಸಲು ಸತ್ತರು. ದೇಹದಲ್ಲಿ ಅವರು ವಧಿತರಾದರೂ ಆತ್ಮದಲ್ಲಿ ಜೀವಂತರಾದರು.

[19]ಆಧ್ಯಾತ್ಮಿಕವಾಗಿಯೇ ತೆರಳಿ ಸೆರೆಯಲ್ಲಿದ್ದ ಆತ್ಮಗಳಿಗೆ ಶುಭಸಂದೇಶವನ್ನು ಬೋಧಿಸಿದರು.
[20]ಪೂರ್ವಕಾಲದಲ್ಲಿ ನೋವನು ನಾವೆಯನ್ನು ಕಟ್ಟುತ್ತಿದ್ದಾಗ ತಾಳ್ಮೆಯಿಂದಿದ್ದ ದೇವರಿಗೆ ಅವಿಧೇಯರಾಗಿದ್ದ
ಆತ್ಮಗಳೇ ಅವು. ನಾವೆಯೊಳಗಿದ್ದು ಕೆಲವರು, ಅಂದರೆ ಎಂಟು ಜನರು, ಜಲದಿಂದ ರಕ್ಷಣೆ ಹೊಂದಿದರು.
[21]ಇದು ದೀಕ್ಷಾಸ್ನಾನವನ್ನು ಸೂಚಿಸುವ ಒಂದು ಸಂಕೇತ. ಈ ದೀಕ್ಷಾಸ್ನಾನ ಯೇಸುಕ್ರಿಸ್ತರ ಪುನರುತ್ಥಾನದ
ಮೂಲಕ ನಿಮಗೆ ಜೀವೋದ್ಧಾರವನ್ನು ನೀಡುತ್ತದೆ. ಇದು ಕೇವಲ ದೇಹದ ಮಾಲಿನ್ಯವನ್ನು
ಹೋಗಲಾಡಿಸುವಂಥಾದ್ದಲ್ಲ; ಶುದ್ಧಮನಸ್ಸಿನಿಂದ ದೇವರಿಗೆ ಮಾಡುವ ಪ್ರಮಾಣ ವಚನವಾಗಿದೆ.
[22]ಯೇಸುಕ್ರಿಸ್ತರು ಸ್ವರ್ಗಕ್ಕೆ ಏರಿ, ದೇವರ ಬಲಪಾರ್ಶ್ವದಲ್ಲಿ ಆಸೀನರಾಗಿದ್ದಾರೆ; ದೂತಗಣಗಳ ಮೇಲೂ
ಸ್ವರ್ಗೀಯ ಶಕ್ತರ ಹಾಗೂ ಅಧಿಕಾರಿಗಳ ಮೇಲೂ ಆಳ್ವಿಕೆ ನಡೆಸುತ್ತಿದ್ದಾರೆ.

### ಸುಧಾರಿತ ಜೀವನ

**4** ಕ್ರಿಸ್ತಯೇಸು ದೈಹಿಕವಾಗಿ ಹಿಂಸೆ ಬಾಧೆಯನ್ನು ಅನುಭವಿಸಿದ್ದರಿಂದ ನೀವೂ ಅವರಲ್ಲಿದ್ದ ಅದೇ
ಭಾವನೆಯಿಂದ ನಿಮ್ಮನ್ನು ಬಲಪಡಿಸಿಕೊಳ್ಳಿರಿ. ದೈಹಿಕವಾಗಿ ಹಿಂಸೆಪಡುವವನು ಪಾಪ ಜೀವನದೊಡನೆ
ಸಂಬಂಧವನ್ನು ಕಡಿದುಕೊಂಡವನು. [2]ಉಳಿದಿರುವ ತನ್ನ ಜೀವಮಾನ ಕಾಲವನ್ನು ಲೌಕಿಕ ವ್ಯಾಮೋಹಗಳಲ್ಲಿ
ಕಳೆಯದೆ ದೇವರ ಚಿತ್ತಕ್ಕನುಸಾರ ಕಳೆಯುತ್ತಾನೆ. [3]ಕ್ರೈಸ್ತರಲ್ಲದವರು ಮಾಡಲು ಇಚ್ಛಿಸುವುದನ್ನೆಲ್ಲಾ ನೀವು
ಗತಕಾಲದಲ್ಲಿ ಮಾಡಿದ್ದು ಸಾಕು. ಆಗ ನೀವು ಅಶ್ಲೀಲತೆ, ಕಾಮ, ಕುಡುಕತನ, ಅಮಲೇರುವಿಕೆ, ದುಂದೌತಣ
ಮತ್ತು ಯೋಗ್ಯವಲ್ಲದ ವಿಗ್ರಹಾರಾಧನೆ – ಈ ಮುಂತಾದವುಗಳಿಗೆ ಒಳಗಾಗಿದ್ದಿರಿ. [4]ಈಗಲಾದರೋ ನೀವು
ಮುಂಚಿನಂತೆ ಲಂಪಟ ಜೀವನದಲ್ಲಿ ಅವರೊಡನೆ ಬೆರೆಯದಿರುವುದನ್ನು ಕಂಡು ಸಖೇದಾಶ್ಚರ್ಯದಿಂದ
ನಿಮ್ಮನ್ನು ದೂಷಿಸುತ್ತಾರೆ. [5]ಜೀವಂತರಿಗೂ ಮೃತರಿಗೂ ನ್ಯಾಯತೀರಿಸಲು ಸಿದ್ಧವಾಗಿರುವ ದೇವರಿಗೆ ಅವರು
ಲೆಕ್ಕ ಕೊಡಬೇಕಾಗುವುದು. [6]ಮೃತರಿಗೂ ಶುಭಸಂದೇಶವನ್ನು ಬೋಧಿಸಲಾಯಿತು. ಏಕೆಂದರೆ, ದೇಹದ
ಮಟ್ಟಿಗೆ ಸಕಲ ಮಾನವರಂತೆ ಮರಣವೆಂಬ ತೀರ್ಪನ್ನು ಹೊಂದಿದ್ದರೂ ದೇವರ ಆತ್ಮದ ಮಟ್ಟಿಗೆ
ದೇವರಂತೆಯೇ ಜೀವಿಸಲೆಂದು ಆ ಸಂದೇಶವನ್ನು ಬೋಧಿಸಲಾಯಿತು.

### ವರದಾನಗಳು ಪರರ ಒಳಿತಿಗಾಗಿ

7 ಎಲ್ಲದರ ಅಂತ್ಯಕಾಲವೂ ಹತ್ತಿರವಾಯಿತು. ಈ ಕಾರಣ ನೀವು ಜಿತೇಂದ್ರಿಯರಾಗಿಯೂ
ಜಾಗ್ರತರಾಗಿಯೂ ಪ್ರಾರ್ಥನೆಮಾಡುತ್ತಿರಿ. [8]ಎಲ್ಲಕ್ಕೂ ಮಿಗಿಲಾಗಿ ಒಬ್ಬರನ್ನೊಬ್ಬರು ಯಥಾರ್ಥವಾಗಿ ಪ್ರೀತಿಸಿರಿ.
ಏಕೆಂದರೆ, ಪ್ರೀತಿ ಅಸಂಖ್ಯಾತ ಪಾಪಗಳನ್ನು ಅಳಿಸಿಹಾಕುತ್ತದೆ. [9]ಗೊಣಗುಟ್ಟದೆ ಒಬ್ಬರಿಗೊಬ್ಬರು ಅತಿಥಿ
ಸತ್ಕಾರ ಮಾಡಿ. [10]ದೇವರ ವಿವಿಧ ವರಗಳ ವಿಷಯದಲ್ಲಿ ಉತ್ತಮ ನಿರ್ವಾಹಕನಂತೆ ಪ್ರತಿಯೊಬ್ಬನೂ
ದೇವರು ತನಗೆ ಕೊಟ್ಟಿರುವ ವಿಶೇಷ ವರದಾನಗಳನ್ನು ಇತರರ ಒಳಿತಿಗಾಗಿ ಬಳಸಲಿ. [11]ಬೋಧಿಸುವ
ವರವನ್ನು ಪಡೆದವನು ದೇವರ ವಾಕ್ಯವನ್ನು ಬೋಧಿಸುವವನಂತೆ ಬೋಧನೆಮಾಡಲಿ. ಸೇವೆಮಾಡುವ
ವರವನ್ನು ಪಡೆದವನು, ದೇವರಿಂದ ಶಕ್ತಿಯನ್ನು ಪಡೆದವನಂತೆ ಸೇವೆಮಾಡಲಿ. ಇದರಿಂದ ಯೇಸುಕ್ರಿಸ್ತರ
ಮುಖಾಂತರ ಎಲ್ಲದರಲ್ಲಿಯೂ ದೇವರಿಗೆ ಸ್ತುತಿಯುಂಟಾಗುವುದು. ಅವರಿಗೆ ಸದಾಕಾಲ ಮಹಿಮೆಯೂ
ಸರ್ವಾಧಿಕಾರವೂ ಸಲ್ಲಲಿ. ಆಮೆನ್.

### ಕ್ರೈಸ್ತವಿಶ್ವಾಸಕ್ಕಾಗಿ ಕಷ್ಟಸಹಿಷ್ಣುತೆ

12 ಪ್ರಿಯರೇ, ಪರಿಶೋಧನೆಗೆಂದು ನಿಮಗೆ ಬಂದೊದಗಿರುವ ಅಗ್ನಿಪರೀಕ್ಷೆಗಾಗಿ
ಆಶ್ಚರ್ಯಪಡಬೇಡಿ. ಅನಿರೀಕ್ಷಿತವಾಗಿ ಏನೋ ಸಂಭವಿಸಿಬಿಟ್ಟಿತೆಂದು ವಿಸ್ಮಯಪಡಬೇಡಿ. [13]ಬದಲಿಗೆ,
ಯೇಸುಕ್ರಿಸ್ತರ ಬಾಧೆಗಳಲ್ಲಿ ಪಾಲುಹೊಂದಿರುತ್ತೀರೆಂದು ಸಂತೋಷಪಡಿ; ಅವರ ಮಹಿಮೆಯು
ಪ್ರತ್ಯಕ್ಷವಾಗುವಾಗ ಪೂರ್ಣ ಹರ್ಷಾನಂದವನ್ನು ಪಡೆಯುವಿರಿ. [14]ಕ್ರಿಸ್ತಯೇಸುವಿನ ನಾಮದ ನಿಮಿತ್ತ ನಿಂದೆ
ಅವಮಾನಗಳಿಗೆ ಗುರಿಯಾದರೆ ನೀವು ಧನ್ಯರು! ಮಹಿಮಾನ್ವಿತ ದೇವರ ಆತ್ಮವು ನಿಮ್ಮಲ್ಲಿ ನೆಲಸಿರುವುದು.

15ನಿಮ್ಮಲ್ಲಿ ಯಾರೂ ಕೊಲೆಗಾರ, ಕಳ್ಳ, ಕೆಡುಕ, ಕುಚೋದ್ಯಗಾರ ಎಂಬ ಕಾರಣದಿಂದ ಹಿಂಸೆಬಾಧೆಗಳಿಗೆ
ಗುರಿಯಾಗಬಾರದು. 16ಅದಕ್ಕೆ ಪ್ರತಿಯಾಗಿ, ಒಬ್ಬನು ಕ್ರೈಸ್ತ ವಿಶ್ವಾಸಿ ಎಂಬ ಕಾರಣದಿಂದ ಹಿಂಸೆಯನ್ನು
ಅನುಭವಿಸಿದರೆ ಅಂಥವನು ನಾಚಿಕೆಪಡಬೇಕಾಗಿಲ್ಲ; ಕ್ರೈಸ್ತವಿಶ್ವಾಸಿ ಎಂಬ ಆ ಹೆಸರನ್ನು ಪಡೆದುದಕ್ಕಾಗಿ
ದೇವರಿಗೆ ಕೃತಜ್ಞತೆ ಸಲ್ಲಿಸಲಿ.

17 ನ್ಯಾಯತೀರ್ಪಿನ ಕಾಲವು ಬಂದಿದೆ. ಮೊತ್ತಮೊದಲು ದೇವರ ಸ್ವಂತ ಜನರೇ ಆ ತೀರ್ಪಿಗೆ
ಗುರಿಯಾಗುವರು. ದೇವಜನರಾದ ನಾವೇ ಅದಕ್ಕೆ ಮೊದಲು ಒಳಗಾಗುವುದಾದರೆ ದೇವರ
ಶುಭಸಂದೇಶದಲ್ಲಿ ವಿಶ್ವಾಸವಿಡದವರ ಗತಿಯಾದರೂ ಏನು? 18"ಸಜ್ಜನರೇ ಸದ್ಗತಿಯನ್ನು ಹೊಂದುವುದು
ಕಷ್ಟವಾಗುವುದಾದರೆ ಇನ್ನು ಭಕ್ತಿಹೀನರೂ ಪಾಪಿಗಳೂ ಆದವರ ಪಾಡೇನು?" ಎಂದು ಪವಿತ್ರಗ್ರಂಥದಲ್ಲೇ
ಬರೆದಿದೆ. 19ಆದ್ದರಿಂದ, ದೇವರ ಚಿತ್ತಾನುಸಾರ ಹಿಂಸೆ ಬಾಧೆಯನ್ನು ಅನುಭವಿಸುವವರು ತಮ್ಮ
ಸತ್ಕ್ರಿಯೆಗಳಲ್ಲಿ ನಿರತರಾಗಿರಲಿ. ಸೃಷ್ಟಿಕರ್ತನಿಗೆ ಶರಣಾಗಲಿ. ಆತ ಅವರನ್ನೆಂದಿಗೂ ಕೈಬಿಡನು.

### ದೇವರ ಮಂದೆಯ ಪಾಲನೆ

**5** ಕ್ರಿಸ್ತಯೇಸುವಿನ ಮರಣ–ಯಾತನೆಯನ್ನು ಕಣ್ಣಾರೆ ಕಂಡವನೂ ಮುಂದೆ ಪ್ರತ್ಯಕ್ಷವಾಗುವ ಮಹಿಮೆಯಲ್ಲಿ
ಭಾಗಿಯಾಗಲಿರುವವನೂ ಸಭಾಪ್ರಮುಖನೂ ಆದ ನಾನು, ನಿಮ್ಮಲ್ಲಿ ಪ್ರಮುಖರಾದ ಇತರರನ್ನು
ಪ್ರೋತ್ಸಾಹಿಸಿ ವಿನಂತಿಸುವುದೇನೆಂದರೆ: 2ನನ್ನ ಜೊತೆಹಿರಿಯರೇ, ದೇವರು ನಿಮಗೆ ವಹಿಸಿಕೊಟ್ಟಿರುವ
ಮಂದೆಯನ್ನು ಕಾಯಿರಿ. ಕಡ್ಡಾಯದಿಂದಲ್ಲ, ದೇವರ ಚಿತ್ತಾನುಸಾರ ಅಕ್ಕರೆಯಿಂದ ಕಾಯಿರಿ. ದ್ರವ್ಯದ
ದುರಾಶೆಯಿಂದಲ್ಲ, ಸೇವಾಸಕ್ತಿಯಿಂದ ಕಾಯಿರಿ. 3ನಿಮ್ಮ ಪಾಲನೆಗೆ ಒಳಗಾಗಿರುವವರ ಮೇಲೆ ದರ್ಪದಿಂದ
ದೊರೆತನಮಾಡದೆ ದೇವರ ಮಂದೆಗೆ ಆದರ್ಶ ಮಾದರಿಗಳಾಗಿರಿ. 4ಆಗಮಾತ್ರ, ಪ್ರಧಾನ ಕುರಿಗಾಹಿ
ಪ್ರತ್ಯಕ್ಷನಾಗುವಾಗ ಮಲಿನವಾಗದ ಮಹಿಮಾನ್ವಿತ ಜಯಮಾಲೆಯನ್ನು ಪಡೆಯುವಿರಿ.

5 ಅಂತೆಯೇ ಯುವಜನರೇ, ನೀವು ಹಿರಿಯರಿಗೆ ವಿಧೇಯರಾಗಿ ನಡೆದುಕೊಳ್ಳಿ. ನೀವೆಲ್ಲರೂ ದೀನ
ಮನೋಭಾವನೆಯನ್ನು ಧರಿಸಿಕೊಂಡು ಒಬ್ಬರಿಗೊಬ್ಬರು ಸೇವೆಮಾಡಿ.

"ಗರ್ವಿಷ್ಠರನ್ನು ದೇವರು ವಿರೋಧಿಸುತ್ತಾರೆ.
ನಮ್ರರಿಗಾದರೋ ಅವರು ದಯೆತೋರು
ತ್ತಾರೆ,"

ಎಂದು ಪವಿತ್ರಗ್ರಂಥದಲ್ಲಿ ಲಿಖಿತವಾಗಿದೆ. 6ದೇವರ ಪರಾಕ್ರಮಕ್ಕೆ ತಗ್ಗಿ ನಮ್ರರಾಗಿ ನಡೆದುಕೊಳ್ಳಿ. ಆಗ ಅವರು
ನಿಮ್ಮನ್ನು ಸಕಾಲದಲ್ಲಿ ಮೇಲಕ್ಕೆತ್ತುವರು; 7ನಿಮ್ಮ ಚಿಂತೆಯನ್ನೆಲ್ಲಾ ಅವರಿಗೇ ಬಿಟ್ಟುಬಿಡಿ. ನಿಮ್ಮ ಮೇಲೆ ಅವರಿಗೆ
ಲಕ್ಷ್ಯವಿದೆ.

8 ಸ್ವಸ್ಥಚಿತ್ತರಾಗಿರಿ, ಜಾಗರೂಕರಾಗಿರಿ. ಏಕೆಂದರೆ, ನಿಮ್ಮ ಶತ್ರುವಾಗಿರುವ ಸೈತಾನನು ಗರ್ಜಿಸುವ
ಸಿಂಹದಂತೆ, ಯಾರನ್ನು ಕಬಳಿಸುವುದೆಂದು ಅತ್ತಿತ್ತ ಹುಡುಕಾಡುತ್ತಿರುವನು. 9ವಿಶ್ವಾಸದಲ್ಲಿ ದೃಢವಾಗಿದ್ದು
ಅವನನ್ನು ಎದುರಿಸಿರಿ. ನಿಮ್ಮ ಸಹವಿಶ್ವಾಸಿಗಳು ಜಗತ್ತಿನಲ್ಲೆಲ್ಲಾ ಇಂಥ ಹಿಂಸೆಬಾಧೆಗಳನ್ನೇ
ಅನುಭವಿಸುತ್ತಿದ್ದಾರೆಂದು ನಿಮಗೆ ತಿಳಿದಿದೆ. 10ಯೇಸುಕ್ರಿಸ್ತರಲ್ಲಿ ನಿಮ್ಮನ್ನು ತಮ್ಮ ಶಾಶ್ವತ ಮಹಿಮೆಗೆ ಕರೆದ
ಕೃಪಾನಿಧಿಯಾದ ದೇವರು ನೀವು ಸ್ವಲ್ಪಕಾಲ ಹಿಂಸೆಬಾಧೆಯನ್ನು ಅನುಭವಿಸಿದ ನಂತರ ನಿಮ್ಮನ್ನು
ಪೂರ್ವಸ್ಥಿತಿಗೆ ತರುವರು; ನಿಮ್ಮನ್ನು ಸ್ಥಿರಗೊಳಿಸಿ ಬಲಪಡಿಸುವರು. 11ಅವರ ಆಳ್ವಿಕೆ ಯುಗಯುಗಾಂತರಕ್ಕೂ
ಇರಲಿ. ಆಮೆನ್.

### ಅಂತಿಮ ವಂದನೆ

12 ನನ್ನ ಈ ಪುಟ್ಟ ಪತ್ರವನ್ನು ನಂಬಿಕಸ್ಥ ಸಹೋದರನಾದ ಸಿಲ್ವಾನನ ಸಹಾಯದಿಂದ ನಿಮಗೆ
ಬರೆದಿರುತ್ತೇನೆ. ನಿಮ್ಮನ್ನು ಪ್ರೋತ್ಸಾಹಿಸಲೆಂದು ಮತ್ತು ಇದುವೇ ದೇವರ ನಿಜವಾದ ಅನುಗ್ರಹವೆಂದು
ಸ್ಪಷ್ಟೀಕರಿಸಲು ಬರೆದಿದ್ದೇನೆ. ಈ ಅನುಗ್ರಹದಲ್ಲಿ ನೀವು ದೃಢವಾಗಿ ನಿಲ್ಲಿರಿ.

13 ನಿಮ್ಮ ಹಾಗೆ ದೇವರಿಂದ ಆಯ್ಕೆಯಾದ ಬಾಬಿಲೋನಿನಲ್ಲಿರುವ ಸಭೆ ನಿಮಗೆ ವಂದನೆಗಳನ್ನು ತಿಳಿಸುತ್ತದೆ. ಅಂತೆಯೇ, ನನ್ನ ಮಗನಂತಿರುವ ಮಾರ್ಕನು ನಿಮ್ಮನ್ನು ವಂದಿಸಿದ್ದಾನೆ. 14ಪ್ರೀತಿಯ ಮುದ್ದನ್ನಿಟ್ಟು ಒಬ್ಬರನ್ನೊಬ್ಬರು ವಂದಿಸಿರಿ.

ಯೇಸುಕ್ರಿಸ್ತರಲ್ಲಿರುವ ನಿಮ್ಮೆಲ್ಲರಿಗೂ ಶಾಂತಿ ಸಮಾಧಾನ ಲಭಿಸಲಿ !